ಪ್ರಜಾವಾಣಿ

ಶುಕ್ರವಾರ • ಮಾರ್ಚ್ 10, 2023

ವಿಶ್ವ ಮೂತ್ರಪಿಂಡ ದಿನದ ಅಂಗವಾಗಿ ಕೆಎಂಸಿಯಲ್ಲಿ ಜಾಗೃತಿ ಕಾರ್ಯಕ್ರಮ

# ‘ವರ್ಷಕ್ಕೊಮ್ಮೆ ಮೂತ್ರಪಿಂಡ ತಪಾಸಣೆ ಅಗತ್ಯ’

ಪ್ರಜಾವಾಣಿ ವಾರ್ತೆ

ಉಡುಪಿ: ವಿಶ್ವ ಮೂತ್ರಪಿಂಡ ದಿನದ ಅಂಗವಾಗಿ ಮಣಿಪಾಲದ ಕಸ್ತೂರಬಾ ಆಸ್ಪತ್ರೆಯಲ್ಲಿ ಗುರುವಾರ ಮೂತ್ರಪಿಂಡ ಆರೋಗ್ಯದ ಕುರಿತು ಜಾಗೃತಿ ಹಾಗೂ ಶಿಕ್ಷಣ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಮಣಿಪಾಲ್ ಕಾಲೇಜ್ ಆಫ್ ಹೆಲ್ತ್ ಪ್ರೊಫೆಷನ್‌ನ ಡೀನ್ ಜಿ. ಅರುಣ್ ಮಯ್ಯ ಮಾತನಾಡಿ, ‘ಮೂತ್ರಪಿಂಡದ ಕಾಯಿಲೆಗೆ ಮಧುಮೇಹ ಪ್ರಮುಖ ಕಾರಣವಾಗಿದ್ದು, ಟೈಪ್ 1 ಮತ್ತು ಟೈಪ್ 2 ಡಯಾಬಿಟಿಸ್‌ನಿಂದ ಹೃದ್ರೋಗ ಮತ್ತು ಸ್ಥೂಲ ಕಾಯ ಉಂಟಾಗಿ ಮೂತ್ರಪಿಂಡಗಳ ವೈಫಲ್ಯಕ್ಕೆ ಕಾರಣವಾಗುವ ಸಾಧ್ಯತೆಗಳು ಹೆಚ್ಚಾಗಿರುತ್ತವೆ. ವರ್ಷಕ್ಕೊಮ್ಮೆಯಾದರೂ ಮೂತ್ರಪಿಂಡ ತಪಾಸಣೆ ಮಾಡಿಸಿಕೊಳ್ಳುವುದು ಉತ್ತಮ. ಇದಕ್ಕಾಗಿಯೇ ಕೆಎಂಸಿಯಲ್ಲಿ ಮೂತ್ರಪಿಂಡ ಹೆಲ್ತ್ ಚೆಕ್‌ಅಪ್ ಪ್ಯಾಕೇಜ್‌ಗಳನ್ನು ಪರಿಚಯಿಸಲಾಗಿದೆ ಎಂದರು.

**ಮುಖ್ಯಾಂಶಗಳು**

- ‘ಮೂತ್ರಪಿಂಡದ ಕಾಯಿಲೆಗೆ ಮಧುಮೇಹ ಪ್ರಮುಖ ಕಾರಣ’
- ‘ಸಾರ್ವಜನಿಕರಿಗೆ ಮೂತ್ರಪಿಂಡ ಆರೋಗ್ಯದ ಕುರಿತು ಅರಿವು ಅಗತ್ಯ’

ಮೂತ್ರಪಿಂಡ ವಿಭಾಗದ ಪ್ರಾಧ್ಯಾಪಕ ಮತ್ತು ಮುಖ್ಯಸ್ಥ ಡಾ. ಶಂಕರ್ ಪ್ರಸಾದ್ ಪ್ರಾಸ್ತಾವಿಕವಾಗಿ ಮಾತನಾಡಿ, ‘ಪ್ರತಿ ವರ್ಷ ಮಾರ್ಚ್ ತಿಂಗಳ ಎರಡನೇ ಗುರುವಾರ ವಿಶ್ವ ಮೂತ್ರಪಿಂಡ ದಿನವನ್ನಾಗಿ ಆಚರಿಸಲಾಗುತ್ತದೆ. ಸಾರ್ವಜನಿಕರಿಗೆ ಮೂತ್ರಪಿಂಡ ಆರೋಗ್ಯದ ಕುರಿತು ಅರಿವು ಮತ್ತು ಜಾಗೃತಿ ನೀಡುವುದು ಇದರ ಉದ್ದೇಶ.

ಈ ವರ್ಷದ ಘೋಷ ವಾಕ್ಯ ‘ಅನಿರೀಕ್ಷಿತ ಘಟನೆಗಳಿಗೆ ತಯಾರಿ ಮತ್ತು ದುರ್ಬಲ ಸಮುದಾಯಕ್ಕೆ ಬೆಂಬಲ’ ನೀಡುವುದಾಗಿದೆ.



ವಿಶ್ವ ಮೂತ್ರಪಿಂಡ ದಿನದ ಅಂಗವಾಗಿ ಮಣಿಪಾಲದ ಕಸ್ತೂರಬಾ ಆಸ್ಪತ್ರೆಯಲ್ಲಿ ಗುರುವಾರ ರೋಗಿಗಳಿಗೆ ಮತ್ತು ಸಾರ್ವಜನಿಕರಿಗೆ ಮೂತ್ರಪಿಂಡ ಆರೋಗ್ಯದ ಕುರಿತು ಜಾಗೃತಿ ಹಾಗೂ ಶಿಕ್ಷಣ ಕಾರ್ಯಕ್ರಮ ನಡೆಯಿತು

ಕೆಎಂಸಿಯಲ್ಲಿ ಮೂತ್ರಪಿಂಡ ರೋಗಿಗಳಿಗೆ ಮೂತ್ರಪಿಂಡ ಕಸಿ ಸೇರಿದಂತೆ ಅಗತ್ಯ ಚಿಕಿತ್ಸೆಗಳು ಒಂದೇ ಸೂರಿನಡಿ ಲಭ್ಯವಿದೆ ಎಂದರು.

ಮಾಹೆ ಮಣಿಪಾಲದ ಬೋಧನಾ ಅಸ್ಪತ್ರೆಗಳ ಮುಖ್ಯ ನಿರ್ವಹಣಾಧಿಕಾರಿ ಡಾ.ಆನಂದ್ ವೇಣುಗೋಪಾಲ್ ಮತ್ತು ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ್ ಶೆಟ್ಟಿ ಇದ್ದರು. ಕೆಎಂಸಿ ಡೀನ್ ಡಾ. ಪದ್ಮರಾಜ ಹೆಗ್ಡೆ ವಿಶೇಷ ಮೂತ್ರಪಿಂಡ ಹೆಲ್ತ್ ಚೆಕ್ ಪ್ಯಾಕೇಜ್ ಬಿಡುಗಡೆಗೊಳಿಸಿದರು.

ಮೂತ್ರಪಿಂಡ ವಿಭಾಗದ ಪ್ರಾಧ್ಯಾಪಕ ಡಾ.ರವೀಂದ್ರ ಪ್ರಭು ಸ್ವಾಗತಿಸಿದರು. ಮಕ್ಕಳ ಮೂತ್ರಪಿಂಡ ತಜ್ಞ ಡಾ.ದರ್ಶನ್ ರಂಗಸ್ವಾಮಿ ವಂದಿಸಿದರು. ಡಾ.ಶ್ರೀನಿವಾಸ್ ಶೆಣೈ ಕಾರ್ಯಕ್ರಮ ನಿರೂಪಿಸಿದರು.

ವಿಜಯವಾಣಿ
VIJAYAVANI » MANGALURU
ಶುಕ್ರವಾರ 10 ಮಾರ್ಚ್ 2023
10 MARCH 2023

# ಕೆಎಂಸಿಯಲ್ಲಿ ಮೂತ್ರಪಿಂಡ ಜಾಗೃತಿ ಶಿಕ್ಷಣ




ಡೀನ್ ಡಾ.ಪದ್ಮರಾಜ ಹೆಗ್ಡೆ ವಿಶೇಷ ಮೂತ್ರಪಿಂಡ ಹೆಲ್ತ್ ಚೆಕ್ ಪ್ಯಾಕೇಜ್ ಬಿಡುಗಡೆ ಮಾಡಿದರು. ಡೀನ್ ಡಾ.ಜಿ. ಅರುಣ್ ಮಯ್ಯ, ಆಸ್ಪತ್ರೆಗಳ ಸಿಇಒ ಡಾ.ಆನಂದ್ ವೇಣುಗೋಪಾಲ್, ಡಾ.ಶಂಕರ್ ಪ್ರಸಾದ್ ಮತ್ತಿತರರಿದ್ದರು.

■ ವಿಜಯವಾಣಿ ಸುದ್ದಿಜಾಲ ಉಡುಪಿ

ವಿಶ್ವ ಮೂತ್ರಪಿಂಡ ದಿನದ ಅಂಗವಾಗಿ ಗುರುವಾರ ಮಣಿಪಾಲ ಕಸ್ತೂರ್ಬಾ ಆಸ್ಪತ್ರೆಯಲ್ಲಿ ರೋಗಿಗಳಿಗೆ ಮತ್ತು ಸಾರ್ವಜನಿಕರಿಗೆ ಮೂತ್ರಪಿಂಡ ಆರೋಗ್ಯದ ಕುರಿತು ಜಾಗೃತಿ ಹಾಗೂ ಶಿಕ್ಷಣ ಕಾರ್ಯಕ್ರಮ ನಡೆಯಿತು.

ಮುಖ್ಯ ಅತಿಥಿಯಾಗಿದ್ದ ಡೀನ್ ಡಾ.ಪದ್ಮರಾಜ ಹೆಗ್ಡೆ ವಿಶೇಷ ಮೂತ್ರಪಿಂಡ ಹೆಲ್ತ್ ಚೆಕ್ ಪ್ಯಾಕೇಜ್‌ಗಳನ್ನು ಬಿಡುಗಡೆ ಮಾಡಿದರು.

ಗೌರವ ಅತಿಥಿಯಾಗಿದ್ದ ಡೀನ್ ಡಾ.ಜಿ. ಅರುಣ್ ಮಯ್ಯ ಮಾತನಾಡಿ, ಮೂತ್ರಪಿಂಡದ ಕಾಯಿಲೆಗೆ ಮಧುಮೇಹ ಸಾಮಾನ್ಯ ಕಾರಣವಾಗಿದೆ. ಹೃದ್ರೋಗ ಮತ್ತು ಸ್ಥೂಲಕಾಯ, ಮೂತ್ರನಾಳದ ಸಮಸ್ಯೆಗಳು ಮತ್ತು ಮೂತ್ರಪಿಂಡದ ವಿವಿಧ ಭಾಗಗಳಲ್ಲಿ ಉರಿಯೂತವು ದೀರ್ಘಾವಧಿಯ ಮೂತ್ರಪಿಂಡ ತೊಂದರೆಗೆ ಕಾರಣವಾಗಬಹುದು. ವರ್ಷಕೊಮ್ಮೆಯಾದರೂ ಮೂತ್ರಪಿಂಡ ತಪಾಸಣೆ ಮಾಡಿಸಿಕೊಳ್ಳಬೇಕು ಎಂದರು.

ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಗಳ ಮುಖ್ಯಕಾರ್ಯನಿರ್ವಹಣಾಧಿಕಾರಿ ಡಾ.ಆನಂದ್ ವೇಣುಗೋಪಾಲ್ ಮತ್ತು ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ ಶೆಟ್ಟಿ ಉಪಸ್ಥಿತರಿದ್ದರು.

ಮೂತ್ರಪಿಂಡ ವಿಭಾಗದ ಮುಖ್ಯಸ್ಥ ಡಾ.ಶಂಕರ್ ಪ್ರಸಾದ್ ಪ್ರಾಸ್ತಾವಿಕಮಾತನಾಡಿದರು. ಮೂತ್ರಪಿಂಡ ವಿಭಾಗದ ಪ್ರಾಧ್ಯಾಪಕ ಡಾ.ರವೀಂದ್ರ ಪ್ರಭು ಎ. ಸ್ವಾಗತಿಸಿ, ಮಕ್ಕಳ ಮೂತ್ರಪಿಂಡ ತಜ್ಞ ಡಾ.ದರ್ಶನ್ ರಂಗಸ್ವಾಮಿ ವಂದಿಸಿದರು. ಡಾ. ಶ್ರೀನಿವಾಸ್ ಶೆಣೈ ನಿರೂಪಿಸಿದರು.

11-3-2023
UDAYAVANI - MANIPAL

# ಕಸ್ತೂರ್ಬಾ ಆಸ್ಪತ್ರೆ: ಜಾಗೃತಿ, ಶೈಕ್ಷಣಿಕ ಅರಿವು




**ಮಣಿಪಾಲ, ಮಾ. 10:** ವಿಶ್ವ ಮೂತ್ರಪಿಂಡ ದಿನದ ಅಂಗವಾಗಿ ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯ ರೋಗಿಗಳಿಗೆ ಮತ್ತು ಸಾರ್ವಜನಿಕರಿಗೆ ಮೂತ್ರಪಿಂಡ ಆರೋಗ್ಯದ ಕುರಿತು ಜಾಗೃತಿ ಹಾಗೂ ಶಿಕ್ಷಣ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಮುಖ್ಯ ಅಥಿತಿಯಾಗಿದ್ದ ಕೆಎಂಸಿ ಡೀನ್ ಡಾ| ಪದ್ಮರಾಜ ಹೆಗ್ಡೆ ಅವರು ವಿಶೇಷ ಮೂತ್ರಪಿಂಡ ಹೆಲ್ತ್ ಚೆಕ್ ಪ್ಯಾಕೇಜ್‌ಗಳನ್ನು ಬಿಡುಗಡೆ ಮಾಡಿದರು. ಮಣಿಪಾಲ ಕಾಲೇಜ್ ಆಫ್ ಹೆಲ್ತ್ ಪ್ರೊಫೆಶನ್‌ನ ಡೀನ್ ಡಾ| ಜಿ. ಅರುಣ್ ಮಯ್ಯ ಗೌರವ ಅತಿಥಿಯಾಗಿದ್ದರು.

ಮಾಹೆ ಮಣಿಪಾಲದ ಬೋಧನ ಆಸ್ಪತ್ರೆಗಳ ಮುಖ್ಯ ನಿರ್ವಹಣಾಧಿಕಾರಿ ಡಾ| ಆನಂದ್ ವೇಣುಗೋಪಾಲ್ ಮತ್ತು ವೈದ್ಯಕೀಯ ಅಧೀಕ್ಷಕ ಡಾ| ಅವಿನಾಶ ಶೆಟ್ಟಿ ಉಪಸ್ಥಿತರಿದ್ದರು. ಮೂತ್ರಪಿಂಡ ವಿಭಾಗದ ಪ್ರಾಧ್ಯಾಪಕ ಮತ್ತು ಮುಖ್ಯಸ್ಥ ಡಾ| ಶಂಕರ್ ಪ್ರಸಾದ್ ಎನ್. ಪ್ರಸ್ತಾವನೆಗೈದರು. ಮೂತ್ರಪಿಂಡ ವಿಭಾಗದ ಪ್ರಾಧ್ಯಾಪಕ ಡಾ| ರವೀಂದ್ರ ಪ್ರಭು ಎ. ಸ್ವಾಗತಿಸಿ, ಮಕ್ಕಳ ಮೂತ್ರಪಿಂಡ ತಜ್ಞರಾದ ಡಾ| ದರ್ಶನ್ ರಂಗಸ್ವಾಮಿ ವಂದಿಸಿದರು. ಡಾ| ಶ್ರೀನಿವಾಸ್ ಶೆಣೈ ನಿರೂಪಿಸಿದರು.

THE CANARA POST

# Manipal: Kasturba Hospital hosts special kidney health program for patients and public




**Manipal, March 09, 2023:** Kasturba Hospital Manipal marked World Kidney Day with an informative and engaging program aimed at raising awareness about kidney health among patients and the general public.

The program, held today, featured several eminent medical experts, including Dr. Padmaraj Hegde, Dean-KMC Manipal, and Dr. G. Arun Maiya, Dean-Manipal College of Health Professions, who spoke about the common causes of kidney disease.

Dr. Maiya highlighted that diabetes is the leading cause of kidney disease, with both type 1 and type 2 diabetes, high blood pressure, and obesity potentially causing significant damage to the kidneys and leading to kidney failure. He further explained that urinary tract infections could also cause long-term kidney problems.

The hospital, in its efforts to promote kidney health, introduced special kidney health check packages to encourage people to undergo a kidney check-up at least once a year. These check-up packages were launched during the program by Dr. Hegde.

The program was attended by Chief Operating Officer of Teaching Hospitals, MAHE Manipal, Dr. Anand Venugopal, and Medical Superintendent Dr. Avinash Shetty.

Dr. Shankar Prasad N, Professor, and Head Department of Nephrology provided an overview of the significance of World Kidney Day, which is observed worldwide on the second Thursday of March every year.

The objective of this day is to educate and create awareness among the public about kidney health. Each year, the day is observed with a different theme, and this year's theme was "Preparing for the Unexpected and Supporting the Vulnerable."

Dr. Ravindra Prabhu A, Professor of Nephrology, welcomed the gathering, and Dr. Darshan Rangaswamy, Pediatric Nephrologist, proposed a vote of thanks. The master of ceremonies for the program was Dr. Srinivas Shenoy.

Kasturba Hospital, Manipal, provides all necessary treatments for kidney patients, including kidney transplants, under one roof.

The program was a huge success in raising awareness and promoting the importance of maintaining good kidney health among the public.

UDUPI TIMES

Coastal News

# ವಿಶ್ವ ಮೂತ್ರಪಿಂಡ ದಿನದ ಅಂಗವಾಗಿ ಕೆಎಂಸಿಯಲ್ಲಿ ಜಾಗೃತಿ ಕಾರ್ಯಕ್ರಮ

March 9, 2023




ಮಣಿಪಾಲ ಮಾ.9 (**ಉಡುಪಿ ಟೈಮ್ಸ್ ವರದಿ**) : ವಿಶ್ವ ಮೂತ್ರಪಿಂಡ ದಿನದ ಅಂಗವಾಗಿ ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದಲ್ಲಿ ರೋಗಿಗಳಿಗೆ ಮತ್ತು ಸಾರ್ವಜನಿಕರಿಗೆ ಮೂತ್ರಪಿಂಡ ಆರೋಗ್ಯದ ಕುರಿತು ಜಾಗೃತಿ ಹಾಗೂ ಶಿಕ್ಷಣ ಕಾರ್ಯಕ್ರಮ ಇಂದು ನಡೆಯಿತು.

ಕಾರ್ಯಕ್ರಮದಲ್ಲಿ ಅಥಿತಿಯಾಗಿದ್ದ ಮಣಿಪಾಲ್ ಕಾಲೇಜು ಆಫ್ ಹೆಲ್ತ್ ಪ್ರೊಫೆಷನ್ ನ ಡೀನ್ ಡಾ.ಜಿ ಅರುಣ್ ಮಯ್ಯ ಇವರು ಮಾತನಾಡಿ, ಮೂತ್ರಪಿಂಡದ ಕಾಯಿಲೆಗೆ ಮಧುಮೇಹವು ಸಾಮಾನ್ಯ ಕಾರಣವಾಗಿದೆ. ಟೈಪ್ 1 ಮತ್ತು ಟೈಪ್ 2 ಡಯಾಬಿಟಿಸ್ ಎರಡೂ ಹೃದ್ರೋಗ ಮತ್ತು ಸ್ಥೂಲಕಾಯತೆಯು ಮೂತ್ರಪಿಂಡಗಳ ವೈಫಲ್ಯಕ್ಕೆ ಕಾರಣವಾಗುವ ಹಾನಿಗೆ ಕಾರಣವಾಗಬಹುದು. ಮೂತ್ರನಾಳದ ಸಮಸ್ಯೆಗಳು ಮತ್ತು ಮೂತ್ರಪಿಂಡದ ವಿವಿಧ ಭಾಗಗಳಲ್ಲಿ ಉರಿಯೂತವು ದೀರ್ಘಾವಧಿಯ ಮೂತ್ರಪಿಂಡ ತೊಂದರೆಗೆ ಕಾರಣವಾಗಬಹುದು. ಇದರಿಂದ ಮುಂದೆ ಬೇರೆ ಬೇರೆ ಅಂಗಗಳಿಗೆ ತೊಂದರೆ ಆಗಬಹುದು. ಮೂತ್ರಪಿಂಡ ಸೇರಿದಂತೆ ಬೇರೆ ಬೇರೆ ಕಾಯಿಲೆಗಳ ಅರಿವು ಮೂಡಿಸಲು ಆಸ್ಪತ್ರೆಯಲ್ಲಿ ಈ ತರಹದ ಜಾಗೃತಿ ಮತ್ತು ಶಿಕ್ಷಣ ಕಾರ್ಯಕ್ರಮ ಆಯೋಜಿಸಲಾಗುತ್ತದೆ. ಜನರು ಇದರ ಸದುಪಯೋಗ ಪಡಿಸಿಕೊಳ್ಳಬೇಕು. ವರ್ಷಕೊಮ್ಮೆಯಾದರೂ ಮೂತ್ರಪಿಂಡ ತಪಾಸಣೆ ಮಾಡಿಸಿಕೊಳ್ಳಬೇಕು. ಇದಕ್ಕಾಗಿಯೇ ಇಂದು ಮೂತ್ರಪಿಂಡ ಹೆಲ್ತ್ ಚೆಕ್ ಪ್ಯಾಕೇಜ್ ಗಳನ್ನು ಪರಿಚಯಿಸಲಾಗಿದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಮೂತ್ರಪಿಂಡ ವಿಭಾಗದ ಪ್ರಾಧ್ಯಾಪಕ ಮತ್ತು ಮುಖ್ಯಸ್ಥರಾದ ಡಾ ಶಂಕರ್ ಪ್ರಸಾದ್ ಎನ್ ಅವರು, ಪ್ರತೀ ವರ್ಷ ಮಾರ್ಚ್ ತಿಂಗಳ ಎರಡನೇ ಗುರುವಾರ ವಿಶ್ವ ಮೂತ್ರಪಿಂಡ ದಿನವನ್ನಾಗಿ ವಿಶ್ವದಾದ್ಯಂತ ಆಚರಿಸಲಾಗುತ್ತದೆ. ಇದರ ಉದ್ದೇಶ ಸಾರ್ವಜನಿಕರಿಗೆ ಮೂತ್ರಪಿಂಡ ಆರೋಗ್ಯದ ಕುರಿತು ಅರಿವು ಮತ್ತು ಜಾಗೃತಿ ಶಿಕ್ಷಣ ಕೊಡುವುದು ಆಗಿದೆ. ಪ್ರತೀ ವರ್ಷ ವಿಧ ವಿಧದ ವಿಷಯಗಳಿಂದ ಜನರಿಗೆ ಅರಿವು ಮೂಡಿಸಲಾಗುವುದು. ಈ ವರ್ಷದ ಘೋಷ ವಾಕ್ಯ "ಅನಿರೀಕ್ಷಿತ ಘಟನೆಗಳಿಗೆ ತಯಾರಿ ಮತ್ತು ದುರ್ಬಲ ಸಮುದಾಯಕ್ಕೆ ಬೆಂಬಲ". ಬಹಳ ಮುಖ್ಯವಾಗಿ ನಮ್ಮಲ್ಲಿ ಮೂತ್ರಪಿಂಡ ರೋಗಿಗಳಿಗೆ ಮೂತ್ರಪಿಂಡ ಕಸಿ ಸೇರಿದಂತೆ ಎಲ್ಲಾ ಅವಶ್ಯ ಚಿಕಿತ್ಸೆ ಒಂದೇ ಸೂರಿನಡಿ ದೊರೆಯುತ್ತದೆ ಎಂದು ಹೇಳಿದರು.

ಮುಖ್ಯ ಅಥಿತಿಯಾಗಿದ್ದ ಡಾ ಪದ್ಮರಾಜ ಹೆಗ್ಡೆ, ಡೀನ್-ಕೆ ಎಂ ಸಿ ಮಣಿಪಾಲ ಇವರು ವಿಶೇಷ ಮೂತ್ರಪಿಂಡ ಹೆಲ್ತ್ ಚೆಕ್ ಪ್ಯಾಕೇಜ್ ಗಳನ್ನು ಬಿಡುಗಡೆ ಮಾಡಿದರು. ಮಾಹೆ ಮಣಿಪಾಲದ ಭೋದನಾ ಆಸ್ಪತ್ರೆಗಳ ಮುಖ್ಯ ನಿರ್ವಹಣಾಧಿಕಾರಿ ಡಾ ಆನಂದ್ ವೇಣುಗೋಪಾಲ್ ಮತ್ತು ವೈದ್ಯಕೀಯ ಅಧೀಕ್ಷಕ ಡಾ ಅವಿನಾಶ ಶೆಟ್ಟಿ, ಮೂತ್ರಪಿಂಡ ವಿಭಾಗದ ಪ್ರಾಧ್ಯಾಪಕರಾದ ಡಾ ರವೀಂದ್ರ ಪ್ರಭು ಎ., ಮಕ್ಕಳ ಮೂತ್ರಪಿಂಡ ತಜ್ಞರಾದ ಡಾ ದರ್ಶನ್ ರಂಗಸ್ವಾಮಿ, ಡಾ ಶ್ರೀನಿವಾಸ್ ಶೆಣೈ ಉಪಸ್ಥಿತರಿದ್ದರು.

# ಕೆ.ಎಂ.ಸಿ ಮಣಿಪಾಲ: ವಿಶ್ವ ಮೂತ್ರಪಿಂಡ ದಿನ ಜಾಗೃತಿ ಕಾರ್ಯಕ್ರಮ

By **Udupi Bulletin News Desk** - March 9, 2023 0




**ಮಣಿಪಾಲ, ಮಾ. 9:** ವಿಶ್ವ ಮೂತ್ರಪಿಂಡ ದಿನದ ಅಂಗವಾಗಿ ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದಲ್ಲಿ ರೋಗಿಗಳಿಗೆ ಮತ್ತು ಸಾರ್ವಜನಿಕರಿಗೆ ಮೂತ್ರಪಿಂಡ ಆರೋಗ್ಯದ ಕುರಿತು ಜಾಗೃತಿ ಹಾಗೂ ಶಿಕ್ಷಣ ಕಾರ್ಯಕ್ರಮ ಆಯೋಜಿಸಲಾಗಿತ್ತು. ಗುರುವಾರ ನಡೆದ ಕಾರ್ಯಕ್ರಮದಲ್ಲಿ ಮುಖ್ಯ ಅಥಿತಿಯಾಗಿದ್ದ ಕೆ.ಎಂ.ಸಿ ಮಣಿಪಾಲ ಡೀನ್ ಡಾ. ಪದ್ಮರಾಜ ಹೆಗ್ಡೆ ಇವರು ವಿಶೇಷ ಮೂತ್ರಪಿಂಡ ಹೆಲ್ತ್ ಚೆಕ್ ಪ್ಯಾಕೇಜ್ ಗಳನ್ನು ಬಿಡುಗಡೆ ಮಾಡಿದರು.

ಗೌರವ ಅಥಿತಿಯಾಗಿದ್ದ ಮಣಿಪಾಲ್ ಕಾಲೇಜು ಆಫ್ ಹೆಲ್ತ್ ಪ್ರೊಫೆಷನ್ ಡೀನ್ ಡಾ. ಜಿ ಅರುಣ್ ಮಯ್ಯ ಇವರು ಮಾತನಾಡುತ್ತಾ, ಮೂತ್ರಪಿಂಡದ ಕಾಯಿಲೆಗೆ ಮಧುಮೇಹವು ಸಾಮಾನ್ಯ ಕಾರಣವಾಗಿದೆ. ಟೈಪ್ 1 ಮತ್ತು ಟೈಪ್ 2 ಡಯಾಬಿಟಿಸ್ ಎರಡೂ, ಹೃದ್ರೋಗ ಮತ್ತು ಸ್ಥೂಲಕಾಯತೆಯು ಮೂತ್ರಪಿಂಡಗಳ ವೈಫಲ್ಯಕ್ಕೆ ಕಾರಣವಾಗುವ ಹಾನಿಗೆ ಕಾರಣವಾಗಬಹುದು. ಮೂತ್ರನಾಳದ ಸಮಸ್ಯೆಗಳು ಮತ್ತು ಮೂತ್ರಪಿಂಡದ ವಿವಿಧ ಭಾಗಗಳಲ್ಲಿ ಉರಿಯೂತವು ದೀರ್ಘಾವಧಿಯ ಮೂತ್ರಪಿಂಡ ತೊಂದರೆಗೆ ಕಾರಣವಾಗಬಹುದು. ಇದರಿಂದ ಮುಂದೆ ಬೇರೆ ಬೇರೆ ಅಂಗಗಳಿಗೆ ತೊಂದರೆ ಆಗಬಹುದು.

ಮೂತ್ರಪಿಂಡ ಸೇರಿದಂತೆ ಬೇರೆ ಬೇರೆ ಕಾಯಿಲೆಗಳ ಅರಿವು ಮೂಡಿಸಲು ಆಸ್ಪತ್ರೆಯಲ್ಲಿ ಈ ತರಹದ ಜಾಗೃತಿ ಮತ್ತು ಶಿಕ್ಷಣ ಕಾರ್ಯಕ್ರಮ ಆಯೋಜಿಸಲಾಗುತ್ತದೆ. ಜನರು ಇದರ ಸದುಪಯೋಗ ಪಡಿಸಿಕೊಳ್ಳಬೇಕು. ವರ್ಷಕೊಮ್ಮೆಯಾದರೂ ಮೂತ್ರಪಿಂಡ ತಪಾಸಣೆ ಮಾಡಿಸಿಕೊಳ್ಳಬೇಕು. ಇದಕ್ಕಾಗಿಯೇ ಇಂದು ಮೂತ್ರಪಿಂಡ ಹೆಲ್ತ್ ಚೆಕ್ ಪ್ಯಾಕೇಜ್ ಗಳನ್ನು ಪರಿಚಯಿಸಲಾಗಿದೆ ಎಂದರು. ಮಾಹೆ ಮಣಿಪಾಲದ ಭೋದನಾ ಆಸ್ಪತ್ರೆಗಳ ಮುಖ್ಯ ನಿರ್ವಹಣಾಧಿಕಾರಿ ಡಾ. ಆನಂದ್ ವೇಣುಗೋಪಾಲ್ ಮತ್ತು ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ ಶೆಟ್ಟಿ ಉಪಸ್ಥಿತರಿದ್ದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಮೂತ್ರಪಿಂಡ ವಿಭಾಗದ ಪ್ರಾಧ್ಯಾಪಕ ಮತ್ತು ಮುಖ್ಯಸ್ಥರಾದ ಡಾ. ಶಂಕರ್ ಪ್ರಸಾದ್ ಎನ್ ಅವರು, ಪ್ರತೀ ವರ್ಷ ಮಾರ್ಚ್ ತಿಂಗಳ ಎರಡನೇ ಗುರುವಾರ ವಿಶ್ವ ಮೂತ್ರಪಿಂಡ ದಿನವನ್ನಾಗಿ ವಿಶ್ವದಾದ್ಯಂತ ಆಚರಿಸಲಾಗುತ್ತದೆ. ಇದರ ಉದ್ದೇಶ ಸಾರ್ವಜನಿಕರಿಗೆ ಮೂತ್ರಪಿಂಡ ಆರೋಗ್ಯದ ಕುರಿತು ಅರಿವು ಮತ್ತು ಜಾಗೃತಿ ಶಿಕ್ಷಣ ಕೊಡುವುದು ಆಗಿದೆ. ಪ್ರತೀ ವರ್ಷ ವಿಧ ವಿಧದ ವಿಷಯಗಳಿಂದೆ ಜನರಿಗೆ ಅರಿವು ಮೂಡಿಸಲಾಗುವುದು. ಈ ವರ್ಷದ ಘೋಷ ವಾಕ್ಯ "ಅನಿರೀಕ್ಷಿತ ಘಟನೆಗಳಿಗೆ ತಯಾರಿ ಮತ್ತು ದುರ್ಬಲ ಸಮುದಾಯಕ್ಕೆ ಬೆಂಬಲ".

ಬಹಳ ಮುಖ್ಯವಾಗಿ ನಮ್ಮಲ್ಲಿ ಮೂತ್ರಪಿಂಡ ರೋಗಿಗಳಿಗೆ ಮೂತ್ರಪಿಂಡ ಕಸಿ ಸೇರಿದಂತೆ ಎಲ್ಲಾ ಅವಶ್ಯ ಚಿಕಿತ್ಸೆ ಒಂದೇ ಸೂರಿನಡಿ ದೊರೆಯುತ್ತದೆ ಎಂದು ಹೇಳಿದರು. ಮೂತ್ರಪಿಂಡ ವಿಭಾಗದ ಪ್ರಾಧ್ಯಾಪಕರಾದ ಡಾ ರವೀಂದ್ರ ಪ್ರಭು ಎ ಸ್ವಾಗತಿಸಿ, ಮಕ್ಕಳ ಮೂತ್ರಪಿಂಡ ತಜ್ಞರಾದ ಡಾ. ದರ್ಶನ್ ರಂಗಸ್ವಾಮಿ ವಂದಿಸಿದರು. ಡಾ. ಶ್ರೀನಿವಾಸ್ ಶೆಣೈ ಕಾರ್ಯಕ್ರಮ ನಿರೂಪಿಸಿದರು.

## Other Links:

Public Next - https://publicnext.com/article/nid/Udupi/Mangalore/Health-and-Fitness/?lang=kn&node=791760